

ಅರುಣ ಪಿ. ಭಟ್ಟ

## 31.08.2023ದಿಂದ 06.09.2023ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಬಹಳ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ 01. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಖರ್ಚನ್ನು ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯಮಿಗಳು, ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ವೈಯಕ್ತಿಕ ಜೀವನದಲ್ಲಿ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 02. ಹನುಮಾನ್ ಚಾಲೀಸ್ ಪಠಿಸಿರಿ.




ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಕೆಲಸದಲ್ಲಿ ಗುಣಮಟ್ಟ ಮತ್ತು ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಗೌರವ ಹೆಚ್ಚಾಗಲಿದೆ. ನಿಮ್ಮ ಉತ್ಸಾಹ ಸಹ ಹೆಚ್ಚಾಗಲಿದೆ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರಿಳಿತ ಕಾಣುತ್ತೀರಿ. ಶುಭದಿನ 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಶೈಕ್ಷಣಿಕ ವಲಯದಲ್ಲಿ ಇರುವವರು, ವಿದ್ಯಾರ್ಥಿಗಳ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ನೌಕರರಿಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಶುಭದಿನ 03. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರು ಪ್ರಗತಿ ಕಾಣುತ್ತೀರಿ. ಬೆಳವಣಿಗೆ ಚೆನ್ನಾಗಿ ಇರಲಿದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಶುಭದಿನ 05. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ವ್ಯವಹಾರದಲ್ಲಿ ಉತ್ತಮ ಪ್ರತಿಫಲ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿಗಳು ಪ್ರಯತ್ನ ಪಡುತ್ತಾರೆ. ನೀವು ಈ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕು. ಶುಭದಿನ 04. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ನಿಮ್ಮ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲು ಶುರುವಾಗುತ್ತದೆ. ವಾರದ ಅಂತ್ಯಕ್ಕೆ ಮಿಶ್ರ ಫಲಿತಾಂಶವನ್ನು ಕಾಣಲಿದ್ದೀರಿ. ಶುಭದಿನ 03. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿದ್ದವರಿಗೆ ಅದ್ಭುತವಾದ ಯಶಸ್ಸು. ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ದಿಢೀರ್ ಖರ್ಚು ಹೆಚ್ಚಬಹುದು. ನಿಮ್ಮ ಕೆಲಸ ನಿರ್ವಹಣೆಗೆ ಒತ್ತಡ ಹೆಚ್ಚಾಗುತ್ತದೆ. ವ್ಯಾಪಾರಸ್ಥರ ಬೆಳವಣಿಗೆಗೆ ಅವಕಾಶ. ಶುಭದಿನ 06. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ತಮ್ಮ ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 04. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಜ್ಞಾನ ಹೆಚ್ಚಿಸಿಕೊಳ್ಳಲು ವಾರದ ಆರಂಭದಲ್ಲಿ ಉತ್ತಮವಾದ ಅವಕಾಶ ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಉದ್ಯೋಗಸ್ಥರಿಗೆ ಬಡ್ತಿ ದೊರೆಯುವ ಅವಕಾಶಗಳಿವೆ. ಶುಭದಿನ 02. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ವಾರದ ಅಂತ್ಯದಲ್ಲಿ ನಿಮ್ಮ ಆರೋಗ್ಯ ಸಮಸ್ಯೆಗಳು ಕೂಡ ನಿವಾರಣೆ ಆಗುತ್ತವೆ. ಶುಭದಿನ 01. ಗಣೇಶ ಪಂಚರತ್ನ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ನಿಮ್ಮ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 02. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.